ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ವಸತಿ ಇಲಾಖೆಯಿಂದ ಹಂಚಿಕೆಯಾಗಿರುವ ಮನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

177 (18) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು; ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳ ವಿವರ ನೀಡುವುದು ; (ತಾಲ್ಲೂಕು ಮತ್ತು ಹೋಬಳಿ, ಗ್ರಾಮ, ಫಲಾನುಭವಿಗಳ ಹೆಸರು ಜಾತಿವಾರು)

(ಆ) ಹಂಚಿಕೆಯಾಗಿರುವ ಮನೆಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾಗಿರುವ ಅನುದಾನವೆಷ್ಟು; ಮಂಜೂರಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; ಫಲಾನುಭವಿವಾರು ವಿವರ ನೀಡುವುದು; (ತಾಲ್ಲೂಕು, ಹೋಬಳಿ, ಗ್ರಾಮ, ಫಲಾನುಭವಿ ಹೆಸರು ಮತ್ತು ಜಾತಿ)

(ಇ) ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ತಾಲ್ಲೂಕು, ಹೋಬಳಿ, ಗ್ರಾಮ, ನಿರ್ವಸತಿಕರ ಹೆಸರು ಮತ್ತು ಜಾತಿ ಮಾಹಿತಿಯೊಂದಿಗೆ ವಿವರ ನೀಡುವುದು)